# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 447 (511) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12-12-2024 |
| ಉತ್ತರಿಸುವ ಸಚಿವರು | ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಲು ನಿಗದಿಪಡಿಸಿದ ಕೊನೆಯ ದಿನಾಂಕವನ್ನು ಡಿಸೆಂಬರ್ 31, 2024ರವರೆಗೆ ವಿಸ್ತರಿಸಲಾಗಿದ್ದು, ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು SLOTS OPEN ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗೆ ನೋಂದಣಿ ಮಾಡಿಕೊಳ್ಳಲು SLOTS OPEN ಮಾಡಲು ಕ್ರಮವಹಿಸಲಾಗುತ್ತಿದೆ. |
| ಆ) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪಾಸು ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕವನ್ನು ಡಿಸೆಂಬರ್ 31, 2024 ರವರೆಗೆ ವಿಸ್ತರಿಸಿದ ನಂತರ ಅಂದರೆ 1/1/2024 ದಿಂದ ಪ್ರಸ್ತುತ ದಿನಾಂಕದವರೆಗೆ ಎಷ್ಟು ಬಾರಿ CLT SLOTS ಗಳನ್ನು OPEN ಮಾಡಲಾಗಿದೆ ಮತ್ತು ಯಾವ ಯಾವ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿದೆ ಹಾಗೂ ಈ ಪರೀಕ್ಷೆಗಳಲ್ಲಿ ಒಟ್ಟು ಎಷ್ಟು ಅಧಿಕಾರಿ/ ನೌಕರರು ಪರೀಕ್ಷೆ ಬರೆದಿರುತ್ತಾರೆ; (ಸಂಪೂರ್ಣ ಮಾಹಿತಿ ನೀಡುವುದು) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸುವ ಕಾರ್ಯವನ್ನು ಕಿಯೋನಿಕ್ಸ್ ಸಂಸ್ಥೆಗೆ ವಹಿಸಲಾಗಿದ್ದು, ಸದರಿ ಸಂಸ್ಥೆಗೆ ಕೆಟಿಪಿಪಿ ನಿಯಮಗಳನ್ವಯ ನೀಡಲಾಗಿದ್ದ 4(ಜಿ) ವಿನಾಯಿತಿಯನ್ನು ಸರ್ಕಾರವು ದಿನಾಂಕ:22-11-2023ರಂದು ತಡೆಹಿಡಿದಿರುವುದರಿಂದ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಿರುವುದಿಲ್ಲ. |
| ಇ) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಬರೆಯಲು CLT SLOTS ಗಳನ್ನು ಯಾವಾಗ OPEN ಮಾಡಲಾಗುವುದು? | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಕ್ರಮವಹಿಸಲಾಗುತ್ತಿದೆ. |

ಕಡತ ಸಂಖ್ಯೆ: ಸಿಆಸುಇ 221 ಇಜಿಎಂ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ